ಮೀರಿರುವುದರಿಂದ, ಹಲವಾರು ಜನರು ಅರ್ಜಿ ಸಲ್ಲಿಸಲಾಗದೇ ಬಾಕಿ ಉಳಿದಿರುವ ಪ್ರಕರಣಗಳು ಸರ್ಕಾರದ ಗಮನದಲ್ಲಿದೆಯೇ

ಆ) ಹೀಗೆ ಅರ್ಜಿ ಸಲ್ಲಿಸಲಾಗದವರಿಗೆ ಮತ್ತೊಮ್ಮೆ ಸಲ್ಲಿಸಲು ಅವಕಾಶ ಕೊಡಲಾಗುವುದೇ

ಇ) ಈ ರೀತಿ ಅರ್ಜಿ ಸಲ್ಲಿಸಲಾಗದ ಬಡ ಮನೆ ನಿವೇಶನದಾರರಿಗೆ ದಬ್ಬಾಳಿಕೆ ನಡೆಸುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ?

ಈ) ಹಾಗಿದ್ದಲ್ಲಿ ಈ ಬಡ ನಿವೇಶನದಾರರಿಗೆ ರಕ್ಷಣೆ ನೀಡಲು ಸರ್ಕಾರ ಏನು ಕ್ರಮ ಕೈಗೊಳ್ಳುವುದು?

ಶ್ರೀ ಮಲ್ಲಿಕಾರ್ಜುನ ಎಂ.ಖರ್ಗೆ, ಕಂದಾಯ ಸಚಿವರು

ಅ) ಇಲ್ಲ

ಆ) ಇಲ್ಲ

ಇ) ಇಲ್ಲ

ಈ) ಉದ್ಭವಿಸುವುದಿಲ್ಲ

ಕರ್ನಾಟಕ ಕರಾವಳಿಯಲ್ಲಿ ಕೃಷಿ ತೋಟಗಾರಿಕಾ ಕಾಲೇಜು ಸ್ಥಾಪನೆ

1233 - ಶ್ರೀ ಜಿ.ಎಸ್.ಆಚಾರ್(ಬೈಂದೂರು) : ಮಾನ್ಯ ಕೃಷಿ ಮತ್ತು ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕದ ಕರಾವಳಿಯ ರೈತರ ಮಕ್ಕಳ ಉಪಯೋಗಕ್ಕಾಗಿ ಪ್ರತ್ಯೇಕ ಕೃಷಿ ತೋಟಗಾರಿಕಾ ಕಾಲೇಜನ್ನು ಸ್ಥಾಪಿಸುವ ವಿಚಾರ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಆ) ಈ ವಿಚಾರದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಿಂದ ಬಂದ ಮನವಿಗಳ ಬಗ್ಗೆ ಯಾವ ತೀರ್ಮಾನ ಕೈಗೊಳ್ಳಲಾಗಿದೆಯೇ?

ಇ) ಸಾಕಷ್ಟು ಅಧ್ಯಯನ ನಡೆಸಿ ಅನುಕೂಲಕರವಾದ ಸೂಕ್ತಕ್ರಮ ಕೈಗೊಳ್ಳಲಾಗುವುದೆ?

ಶ್ರೀ ಜಿ. ಪುಟ್ಟಸ್ವಾಮಿಗೌಡ, ಕೃಷಿ ಮತ್ತು ತೋಟಗಾರಿಕೆ ಸಚಿವರು

ಅ) ಇಲ್ಲ

ಆ) ಮನವಿಯನ್ನು ಪರಿಶೀಲಿಸಿ ಅಲ್ಲಿ ಕೃಷಿ ತೋಟಗಾರಿಕೆ ಕಾಲೇಜು ಅಗತ್ಯವಿಲ್ಲವೆಂದು ತೀರ್ಮಾನಿಸಲಾಗಿದೆ.

ಇ) ಮೇಲಿನ ಪ್ರಶ್ನೆಗೆ ಕೊಟ್ಟಿರುವ ಉತ್ತರದಿಂದಾಗಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಹೊಸ ಜಿಲ್ಲೆ, ತಾಲ್ಲೂಕುಗಳ ರಚನೆ

1234 - ಶ್ರೀ ಜಿ.ಎಸ್. ಆಚಾರ್ (ಬೈಂದೂರು) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾನ್ಯ ಮುಖ್ಯಮಂತ್ರಿಗಳು ಹಾಗೂ ಕೆಲವು ಸಚಿವರುಗಳು ತಮ್ಮ ಸಂಚಾರ ಕಾಲದಲ್ಲಿ ಕೆಲವು ಹೊಸ ಜಿಲ್ಲೆ : ತಾಲ್ಲೂಕುಗಳ ರಚನೆಯ ಕುರಿತು ಆಶ್ವಾಸನೆ ನೀಡಿರುವುದನ್ನು ಮಾನ್ಯ ಕಂದಾಯ ಸಚಿವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಹೊಸ ಜಿಲ್ಲೆ : ತಾಲ್ಲೂಕುಗಳ ರಚನೆ ಯಾವಾಗ ಮಾಡಲಾಗುವುದು

ಇ) ಬಹು ಪ್ರಾಮುಖ್ಯವಾದ ಉಡುಪಿ ಜಿಲ್ಲೆ ಹಾಗೂ ಬೈಂದೂರು ತಾಲ್ಲೂಕು ರಚನೆಗೆ ಆದ್ಯತೆ ನೀಡಲಾಗುವುದೇ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು):

ಅ) ಹೌದು

ಆ) ನಿಖರವಾದ ಅವಧಿಯನ್ನು ಸೂಚಿಸಲು ಕಷ್ಟ ಸಾಧ್ಯ

ಇ) ವರದಿಗಳು ಇನ್ನೂ ಸರ್ಕಾರದ ಪರಿಶೀಲನೆಯಲ್ಲಿದೆ.

ಬಸವಕಲ್ಯಾಣ ಪಟ್ಟಣಕ್ಕೆ ಕುಡಿಯುವ ನೀರು ಸರಬರಾಜು

1270 - ಶ್ರೀ ಬಸವರಾಜ್ ಪಾಟೀಲ್ ಅಟ್ಟೂರು (ಬಸವಕಲ್ಯಾಣ) : ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಇಲಾಖೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣ ಪಟ್ಟಣದಲ್ಲಿ ಒಳಚರಂಡಿ ವ್ಯವಸ್ಥೆ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಸಮರ್ಪಕವಿಲ್ಲದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಇದನ್ನು ಯಾವಾಗ ಮಂಜೂರು ಮಾಡಲಾಯಿತು?

ಇ) ಇದಕ್ಕೆ ತಗಲುವ ವೆಚ್ಚವೆಷ್ಟು?

ಈ) ಬಸವಕಲ್ಯಾಣ ಪಟ್ಟಣದಲ್ಲಿ ಒಳಚರಂಡಿ ಹಾಗೆ ಕುಡಿಯುವ ನೀರಿನ ವ್ಯವಸ್ಥೆಯನ್ನು ಈ ವರ್ಷದ ಬಜೆಟ್ಟಿನಲ್ಲಿ ಸೇರಿಸಲಾಗುವುದೆ?

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು)

ಅ) ಹೌದು

ಆ) ಬಸವಕಲ್ಯಾಣ ಪಟ್ಟಣಕ್ಕೆ ಅಭಿವೃದ್ಧಿ ನೀರು ಸರಬರಾಜು ಯೋಜನೆಯನ್ನು "ಚುಳುಕಿ ನಾಲಾ" ಜಲಮೂಲದಿಂದ ನಿಯೋಜಿಸಲಾಗಿದೆ. ಇದರ ಅಂದಾಜು ಪತ್ರಿಕೆಯನ್ನು ತಯಾರಿಸಲಾಗಿದ್ದು, ಇದು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ತಾಂತ್ರಿಕ ಪರಿಶೀಲನೆಯಲ್ಲಿದೆ.

ಇ) ಬಸವಕಲ್ಯಾಣ ಪಟ್ಟಣದ ಅಭಿವೃದ್ಧಿ ನೀರು ಸರಬರಾಜು ಯೋಜನೆಯ ಅಂದಾಜು ಪಟ್ಟಿಯ ಮೊತ್ತ ರೂ. 318.55 ಲಕ್ಷ ಇರುತ್ತದೆ. ಈ ಪಟ್ಟಣಕ್ಕೆ ಒಳಚರಂಡಿ ಯೋಜನೆಯು ಸಾಧ್ಯತೆಯಿರುವುದಿಲ್ಲ. ಆದರೆ ಕಡಿಮೆ ವೆಚ್ಚದ ಶೌಚಾಲಯಗಳನ್ನು ನಿರ್ಮಿಸಬಹುದು.

ಈ) ಇಲ್ಲ.

ರಾಜ್ಯದ ಬೀಡಿ ಕಾರ್ಮಿಕರ ವೇತನ ಪುನರ್ ಪರಿಶೀಲನೆ

1302 - ಶ್ರೀ ವಿಜಯಕುಮಾರ ಶೆಟ್ಟಿ (ಸುರತ್ಕಲ್) : ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಬೀಡಿ ಕಾರ್ಮಿಕರ ಕನಿಷ್ಠ ವೇತನವನ್ನು ಪುನರ್ ಪರಿಶೀಲಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ?

ಆ) ಬೀಡಿ ಕಾರ್ಮಿಕರ ಕ್ಷೇಮಾಭ್ಯುದ್ಯಯಕ್ಕಾಗಿ ಸರ್ಕಾರ ಕೈಕೊಂಡಿರುವ ಕಾರ್ಯಕ್ರಮಗಳೇನು?

ಶ್ರೀ ಸಿ. ಎಸ್.ನಾಡಗೌಡ (ಕಾರ್ಮಿಕ ರಾಜ್ಯ ಸಚಿವರು):

ಅ) ಹೌದು

ಆ) ಸಂಬಳ ಸಹಿತ ರಜೆ, ಬೋನಸ್. ಹೆರಿಗೆ ಭತ್ಯೆ ರಜೆ, ವಸತಿ, ವೈದ್ಯಕೀಯ ಮತ್ತು ವಿದ್ಯಾರ್ಥಿವೇತನ ಸೌಲಭ್ಯಗಳು ಇತ್ಯಾದಿ.